ಈ) ಪರ್ಯಾಯ ನೇಮಕಾತಿಗಾಗಿ ಸೂಕ್ತ ಅಭ್ಯರ್ಥಿ ಸಿಕ್ಕ ಕೂಡಲೇ ಇವರ ಸೇವೆಯನ್ನು ಮುಕ್ತಾಯಗೊಳಿಸಲಾಗುವುದು.

ವಿಷಯ: ಬೆಂಗಳೂರು ನಗರದ ಹೊರವಲಯದ ನಗರ ಸಭೆಗಳನ್ನು ಪೌರಾಡಳಿತ ನಿರ್ದೇಶನಾಲಯಕ್ಕೆ ಸೇರಿಸದಿರುವ ಬಗ್ಗೆ

2571 (3905)

ಶ್ರೀ ಯು.ಆರ್.ಸಭಾಪತಿ (ಉಡುಪಿ): ಮಾನ್ಯ ಪೌರಾಡಳಿತ ರಾಜ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ಹೊರ ವಲಯದ ಬೊಮ್ಮನಹಳ್ಳಿ ಮಹದೇವಪುರ, ಪಟ್ಟಣಗೆರೆ ದಾಸರಹಳ್ಳಿ, ಕೃಷ್ಣರಾಜಪುರ, ಬ್ಯಾಟರಾಯನಪುರ, ಯಲಹಂಕ ನಗರಸಭೆಗಳು ಪೌರಾಡಳಿತ ನಿರ್ದೇಶನಾಲಯಕ್ಕೆ ಒಳಪಟ್ಟಿರುವುದೇ;

ಆ) ಒಳಪಟ್ಟಿರದಿದ್ದಲ್ಲಿ ಕಾರಣಗಳೇನು (ವಿವರ ನೀಡುವುದು)

ಇ) ಇದರಿಂದ ಸಾರ್ವಜನಿಕರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೇ? ಬಂದಿದ್ದಲ್ಲಿ ಯಾವಾಗ ಮೇಲ್ಕಂಡ ಏಳು ನಗರಸಭೆಗಳನ್ನು ಪೌರಾಡಳಿತ ನಿರ್ದೇಶಕರ ಸಾಮ್ಯಕ್ಕೆ ಒಳಪಡಿಸಲಾಗುವುದು? (ವಿವರ ನೀಡುವುದು).

ಶ್ರೀ ಮಿರಾಜುದ್ದೀನ್ ಎನ್.ಪಟೇಲ್ (ಪೌರಾಡಳಿತ ರಾಜ್ಯ ಸಚಿವರು):

ಅ) ಇಲ್ಲ.

ಆ) ಬೆಂಗಳೂರು ಮಹಾನಗರದ ಅಂಚಿನಲ್ಲಿರುವ ಏಳು ನಗರಸಭೆಯ ಸ್ಥಳೀಯ ಸಂಸ್ಥೆಗಳು ನೇರವಾಗಿ ಮಾನ್ಯ ಮುಖ್ಯ ಮಂತ್ರಿಗಳ ಆಡಳಿತ ವ್ಯಾಪ್ತಿಗೆ ಒಳಪಟ್ಟಿರುತ್ತದೆ.

ಇ) ಉದ್ಭವಿಸುವುದಿಲ್ಲ.

ವಿಷಯ: ಚಿನ್ನಪ್ಪರೆಡ್ಡಿ ಆಯೋಗದ ಮೀಸಲಾತಿ ಕುರಿತು.

2572 (3904)

ಶ್ರೀ ಯು.ಆರ್.ಸಭಾಪತಿ (ಉಡುಪಿ): ಮಾನ್ಯ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿನ್ನಪ್ಪರೆಡ್ಡಿ ಆಯೋಗದ ಮೀಸಲಾತಿ ವರದಿಯನ್ನು ಜಾರಿಗೊಳಿಸುವ